ಕರ್ನಾಟಕ ಸರ್ಕಾರ

ಸಂಖ್ಯೆ: ಇಡಿ 257 ಡಿಸಿಇ 2019 (ಭಾಗ-3)

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ: 15.07.2021

## ಅಧಿಸೂಚನೆ

ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಸಹಾಯಕ ಪ್ರಾಧ್ಯಾಪಕರ ಹುದ್ದೆಗಳನ್ನು ಸ್ಪರ್ಧಾತ್ಮಕ ಪರೀಕ್ಷೆ ಮೂಲಕ ಭರ್ತಿ ಮಾಡಲು ಕರ್ನಾಟಕ ಶಿಕ್ಷಣ ಇಲಾಖಾ ಸೇವೆಗಳು (ಕಾಲೇಜು ಶಿಕ್ಷಣ ಇಲಾಖೆ) (ನೇಮಕಾತಿ) (ವಿಶೇಷ) ನಿಯಮಗಳು 2020ನ್ನು ದಿನಾಂಕ: 08.07.2020 ರಂದು ಹೊರಡಿಸಲಾಗಿದ್ದು, ಸದರಿ ವಿಶೇಷ ನೇಮಕಾತಿ ನಿಯಮಗಳ ನಿಯಮ 2 ರ ಉಪ ನಿಯಮ (ಎಫ್) ರಲ್ಲಿ "ಆಯ್ಕೆ ಪ್ರಾಧಿಕಾರವು ಕರ್ನಾಟಕ ಲೋಕ ಸೇವಾ ಆಯೋಗ (ಕೆ.ಪಿ.ಎಸ್.ಸಿ) ಅಥವಾ ರಾಜ್ಯ ಸರ್ಕಾರ ಅಧಿಸೂಚಿಸುವ ಯಾವುದೇ ಇತರ ಏಜೆನ್ಸಿಯು ಈ ನಿಯಮಗಳ ಉದ್ದೇಶಕ್ಕಾಗಿ ಆಯ್ಕೆ ಪ್ರಾಧಿಕಾರವಾಗುತ್ತದೆ" ಎಂಬುದಾಗಿ ತಿಳಿಸಲಾಗಿದೆ.

ಅದರಂತೆ, ಸರ್ಕಾರದ ಪತ್ರ ಸಂಖ್ಯೆ: ಇಡಿ 257 ಡಿಸಿಇ 2019(ಇ) ದಿನಾಂಕ: 29-06-2021ರಲ್ಲಿ ಸಹಾಯಕ ಪ್ರಾಧ್ಯಾಪಕ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡುವ ಪ್ರಕ್ರಿಯೆ ಆರಂಭಿಸಲು ಅನುಮತಿ ನೀಡಲಾಗಿರುತ್ತದೆ.

ಆದ್ದರಿಂದ ,ಕಾಲೇಜು ಶಿಕ್ಷಣ ಇಲಾಖೆಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಖಾಲಿ ಇರುವ 1242 ಸಹಾಯಕ ಪ್ರಾಧ್ಯಾಪಕರ ಹುದ್ದೆಗಳನ್ನು ನಿಯಮಾನುಸಾರ ಭರ್ತಿ ಮಾಡುವ ಸಲುವಾಗಿ ಆಯ್ಕೆ ಪ್ರಕ್ರಿಯೆಯನ್ನು ನಡೆಸಲು **ಕರ್ನಾಟಕ ಪರೀಕ್ಷಾ ಪ್ರಾಧಿಕಾರ, ಬೆಂಗಳೂರು** ಇವರನ್ನು **'ಆಯ್ಕೆ ಪ್ರಾಧಿಕಾರವನ್ನಾಗಿ'** ನಿಗಧಿಪಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

66
15-07-2021

(ಎಸ್. ಹರ್ಷ)
ಸರ್ಕಾರದ ಅಧೀನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ (ಕಾಲೇಜು ಶಿಕ್ಷಣ)

ಇವರಿಗೆ,

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು – ಇವರಿಗೆ ಮುಂದಿನ ಇ-ರಾಜ್ಯಪತ್ರದಲ್ಲಿ ಪ್ರಕಟಿಸುವಂತೆ ಕೋರಿದೆ.

ಪ್ರತಿ:-

1) ಮಹಾಲೇಖಪಾಲರು, ಕರ್ನಾಟಕ (ಎ ಮತ್ತು ಇ), ಬೆಂಗಳೂರು.
2) ಕಾರ್ಯನಿರ್ವಹಣಾಧಿಕಾರಿ, ಕರ್ನಾಟಕ ಪರೀಕ್ಷಾ ಪ್ರಾಧಿಕಾರ, 18ನೇ ಕ್ರಾಸ್, ಮಲ್ಲೇಶ್ವರಂ, ಬೆಂಗಳೂರು.
3) ಸರ್ಕಾರದ ಕಾರ್ಯದರ್ಶಿ, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನಾ ಇಲಾಖೆ, ವಿಧಾನಸೌಧ, ಬೆಂಗಳೂರು.
4) ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.

5) ಸರ್ಕಾರದ ಉಪ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-8).
6) ಸರ್ಕಾರದ ಉಪ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಸೇವಾನಿಯಮಗಳು)
7) ಮುಖ್ಯ ಆಡಳಿತಾಧಿಕಾರಿ, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು.
8) ಮಾನ್ಯ ಉನ್ನತ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
9) ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ, ಬೆಂಗಳೂರು.
10) ಸರ್ಕಾರದ ಉಪ ಕಾರ್ಯದರ್ಶಿಯವರ, ಅಪ್ತ ಸಹಾಯಕರು, ಉನ್ನತ ಶಿಕ್ಷಣ ಇಲಾಖೆ, ಬೆಂಗಳೂರು.
11) ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿಗಳು.